(109)

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:-2012-13ನೇ ಸಾಲಿಗೆ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಮತ್ತು ಆಯ್ಕೆ ಪ್ರಕ್ರಿಯೆ ಸಂದರ್ಭದಲ್ಲಿ ಪ.ಜಾತಿ ಮತ್ತು ಪ.ವರ್ಗದ ವಿದ್ಯಾರ್ಥಿಗಳಿಗೆ ರೂ.2.00 ಲಕ್ಷ ಆದಾಯ ಮಿತಿ ಪರಿಗಣಿಸುವ ಬಗ್ಗೆ.

ಓದಲಾಗಿದೆ:- 1. ಆದೇಶ ಸಂ;ಸಕಇ 132 ಮೊದೇಶಾ 2010, ದಿನಾಂಕ:01-12-2011.
2. ಆದೇಶ ಸಂ:ಸಕಇ 137 ಪವಯೋ 2011, ದಿನಾಂಕ:08-08-2011.
3.ಏಕ ರೂಪ ಕಡತ ಸಂ:ಕವಶಿಸಸ/ ಶಿಕ್ಷಣ-3/ಸಿಆರ್-111 /2011-12, ದಿನಾಂಕ:08-02-2012.

<u>ಪ್ರಸ್ತಾವನೆ:</u>

ಮೇಲೆ ಓದಲಾದ (1)ರ ಆದೇಶದಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಆದಾಯ ಮಿತಿಯನ್ನು ರೂ.1.00 ಲಕ್ಷಗಳಿಗೆ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ರೂ.1.08. ಲಕ್ಷಕ್ಕೆ ಮಿರದಂತೆ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಆದಾಯ ಮಿತಿಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (3)ರ ಕಡತದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರು ತಮ್ಮ ಪ್ರಸ್ತಾವನೆಯನ್ನು ಸಲ್ಲಿಸಿ, ಕೇಂದ್ರ ಸರ್ಕಾರವು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಪ.ವರ್ಗದವರಿಗೆ ಆದಾಯ ಮಿತಿಯನ್ನು ಉಲ್ಲೇಖ (2)ರ ಆದೇಶದಲ್ಲಿ ಆದಾಯ ಮಿತಿಯನ್ನು 1.45 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಿದಂತೆ, 2012-13ನೇ ಸಾಲಿಗೆ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ವಸತಿ ಶಾಲೆಗಳಿಗೆ 6ನೇ ತರಗತಿಗೆ ಜಿಲ್ಲಾ ಮಟ್ಟದ ಪ್ರವೇಶ ಪರೀಕ್ಷೆ ನಡೆಸಿ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳನ್ನು ದಾಖಲು ಮಾಡಿಕೊಳ್ಳಲು ಪ.ವರ್ಗದ ವಿದ್ಯಾರ್ಥಿಗಳಿಗೆ ಆದಾಯ ಮಿತಿಯನ್ನು ಈ ಪ್ರವೇಶ ಪರೀಕ್ಷೆಗೂ ಅನ್ವಯವಾಗುವಂತೆ ಆದೇಶ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ:ಸಕಇ 33 ಮೋದೇಶಾ 2012, ಬೆಂಗಳೂರು, ದಿನಾಂಕ:06-03-2012,</u>

ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ ವಸತಿ ಶಾಲೆಗಳ 6ನೇ ತರಗತಿಗೆ ಜಿಲ್ಲಾ ಮಟ್ಟದ ಪ್ರವೇಶ ಪರೀಕ್ಷೆ ನಡೆಸಿ, ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕುಟುಂಬದ ಆದಾಯ ಮಿತಿಯನ್ನು ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶಿಸಲಾಗಿದೆ.

1. ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ - ರೂ.2.00 ಲಕ್ಷಗಳು ಮೀರದಂತೆ
2. ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ - ರೂ.2.00 ಲಕ್ಷಗಳು ಮೀರದಂತೆ
3. ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ - ರೂ.44.500 ಮೀರದಂತೆ

ಈ ಆದೇಶವನ್ನು ಇಲಾಖಾ ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ.

1 ಮಹಾಲೇಖಪಾಲರು.(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2 ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ.ಬೆಂಗಳೂರು.
3 ಎಲ್ಲಾ ಜಿಲ್ಲಾಧಿಕಾರಿಗಳು.
4 ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
ಎಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ
5 ಯೋಜನೆ ಸಮನ್ವಯ ಅಧಿಕಾರಿ/ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ
6 ಉಪ ನಿರ್ದೇಶಕರು. ಖಜಾನೆ ಗಣಕಜಾಲ. ರೈಸ್ ಕೋರ್ಸ್ ರಸ್ತೆ, ಬೆಂಗಳೂರು

ಕಾರ್ಯನಿರ್ವಾಹಕ ನಿರ್ದೇಶಕರು
ಕ.ವ.ಶಿ.ಸಂ.ಸಂಘ
ಇವರ ಮುಖಾಂತರ

7 ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
8. ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
9. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
10. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
11. ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.